ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು

**PAPER CLIPPINGS**

16

ಶಾಖೆ / ವಿಷಯ : DEPARTMENT / SUBJECT: ಸಾರ್ವಜನಿಕ ಲೆಕ್ಕಪತ್ರ ಸಮಿತಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 26/9/20

# ಬೆಂಗಳೂರು ಟರ್ಫ್ ಕ್ಲಬ್ ಸ್ಥಳಾಂತರಕ್ಕೆ ಶಿಫಾರಸು

ಉದಯ 26/9/20

**ವಿಧಾನಸಭೆ:** ರಾಜಧಾನಿಯ ಕೇಂದ್ರ ಭಾಗದಲ್ಲಿರುವ ಬೆಂಗಳೂರು ಟರ್ಫ್ ಕ್ಲಬ್ ಅನ್ನು ನಗರದ ಹೊರ ವಲಯಕ್ಕೆ ಸ್ಥಳಾಂತರಿಸಬೇಕು. ಈ ಪ್ರಕ್ರಿಯೆಗಿರುವ ಅಡಚಣೆಗಳ ನಿವಾರಣೆಗೆ ಕಾನೂನು ಹೋರಾಟ ತೀವ್ರಗೊಳಿಸಬೇಕು ಎಂದು ಎಚ್.ಕೆ. ಪಾಟೀಲ್ ಅಧ್ಯಕ್ಷತೆಯ ಸಾರ್ವಜನಿಕ ಲೆಕ್ಕಪತ್ರ ಸಮಿತಿ ಶಿಫಾರಸು ಮಾಡಿದೆ.

ಶುಕ್ರವಾರ ಮಂಡನೆಯಾದ ಸಮಿತಿಯ 4ನೇ ವರದಿಯಲ್ಲಿ ಬೆಂಗಳೂರು ಟರ್ಫ್ ಕ್ಲಬ್ ಅನ್ನು ನಗರದ ಹೊರ ಭಾಗಕ್ಕೆ ಸ್ಥಳಾಂತರಿಸಬೇಕು. ಹಾಲಿ ಟರ್ಫ್ ಕ್ಲಬ್ ಇರುವ ಪ್ರದೇಶವನ್ನು ಲಾಲ್‌ಬಾಗ್ ಇಲ್ಲವೇ ಕಬ್ಬನ್ ಪಾರ್ಕ್ ಮಾದರಿಯಲ್ಲಿ ಅಭಿವೃದ್ಧಿಪಡಿಸಲು ವರದಿಯಲ್ಲಿ ತಿಳಿಸಲಾಗಿದೆ.

ಟರ್ಫ್ ಕ್ಲಬ್ ಸ್ಥಳಾಂತರ ತಡೆ ಕೋರಿ ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಕೆಯಾಗಿ 9 ತಿಂಗಳಾದರೂ ವಿಚಾರಣೆ ನಡೆದಿಲ್ಲ, ಹಾಗಾಗಿ ತ್ವರಿತವಾಗಿ ವಿಚಾರಣೆ ನಡೆಯುವ ನಿಟ್ಟಿನಲ್ಲಿ ಅಡ್ವೋಕೇಟ್ ಜನರಲ್ ಹಾಗೂ ಕಾನೂನು ತಜ್ಞರೊಂದಿಗೆ ಸಮಾಲೋಚಿಸಿ ಅಗತ್ಯವಿರುವ ಎಲ್ಲ ಕ್ರಮ ಕೈಗೊಳ್ಳಬೇಕು ಎಂದು ವರದಿಯಲ್ಲಿ ಹೇಳಲಾಗಿದೆ.

ಬೆಂಗಳೂರು ಟರ್ಫ್ ಕ್ಲಬ್ ಮೈಸೂರು ರೇಸ್‌ಕೋರ್ಸ್ ಪರಿವಾನಗಿ ಕಾಯ್ದೆ-1952ರ ನಿಯಮಗಳನ್ನು ಉಲ್ಲಂಘಿಸಿದೆ. ಹಾಗಾಗಿ ಪರವಾನಗಿ ರದ್ದುಪಡಿಸುವ ಸಂಪೂರ್ಣ ಅಧಿಕಾರ ಆರ್ಥಿಕ ಇಲಾಖೆಗೆ ಇದೆ. ಆದರೆ ಈವರೆಗೆ ಯಾವುದೇ ಕ್ರಮ ಕೈಗೊಳ್ಳದಿರುವುದು ವಿಷಾದನೀಯ. ಪರವಾನಗಿ ನವೀಕರಣವನ್ನು ಮುಖ್ಯಮಂತ್ರಿಗಳ ಅನುಮತಿ ಪಡೆದೇ ಮಾಡಲಾಗಿದೆ. ಆ ಸಂದರ್ಭದಲ್ಲೇ ಆರ್ಥಿಕ ಇಲಾಖೆ ಅಧಿಕಾರಿಗಳು ನಿಯಮ ಉಲ್ಲಂಘನೆಯನ್ನು ಮುಖ್ಯಮಂತ್ರಿಗಳ ಗಮನಕ್ಕೆ ತರಬೇಕಿತ್ತು ಎಂದು ಸಮಿತಿ ವರದಿಯಲ್ಲಿ ಅಭಿಪ್ರಾಯಪಟ್ಟಿದೆ.

ಕೂಡಲೇ ಟರ್ಫ್ ಕ್ಲಬ್ ಮೇಲೆ ಕ್ರಮ ಕೈಗೊಳ್ಳಬೇಕು. ಟರ್ಫ್ ಕ್ಲಬ್‌ನಿಂದ 36.63 ಕೋಟಿ ರೂ. ಬಾಡಿಗೆ ಬಾಕಿ ಇದೆ. ಬಾಕಿ ಮೊತ್ತವನ್ನು ಬಡ್ಡಿಸಮೇತ ವಸೂಲಿ ಮಾಡಬೇಕೆಂದು ಶಿಫಾರಸು ಮಾಡಿದೆ.

## ಗಲಭೆ ಬಗ್ಗೆ ಚರ್ಚೆಗೆ ಮನವಿ

**ವಿಧಾನಸಭೆ:** ಇತ್ತೀಚೆಗೆ ನಡೆದ ಡಿ.ಜೆ. ಹಳ್ಳಿ ಗಲಭೆ ಕುರಿತಂತೆ ನಿಲುವಳಿ ಸೂಚನೆಯಡಿ ಚರ್ಚೆಗೆ ಅವಕಾಶ ನೀಡುವಂತೆ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಮನವಿ ಮಾಡಿರುವುದರಿಂದ ಚರ್ಚೆಗೆ ಅವಕಾಶ ನೀಡುವುದಾಗಿ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ತಿಳಿಸಿದ್ದಾರೆ. ಆದರೆ ಶುಕ್ರವಾರದ ಕಲಾಪದಲ್ಲಿ ಚರ್ಚೆಗೆ ಅವಕಾಶ ಸಿಗಲಿಲ್ಲ, ಶನಿವಾರದ ಕಾರ್ಯಕಲಾಪ ಪಟ್ಟಿಯಲ್ಲೂ ಈ ಬಗ್ಗೆ ಪ್ರಸ್ತಾಪವಿಲ್ಲ.